ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿರುವ ಹಣ

36 (36)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೆಪಲ್ಲಿ): ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಯಲುಸೀಮೆ ಅಭಿವೃದ್ಧಿ ಮಂಡಳಿಗೆ 1997-98ನೇ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ.

ಆ) ಈ ಸಾಲಿನಲ್ಲಿ ಬಿಡುಗಡೆ ಮಾಡಿದ ಹಣದಲ್ಲಿ ಎಷ್ಟು ಕಾಮಗಾರಿಗಳನ್ನು ಪೂರೈಸಲು ಸಾಧ್ಯವಾಗುವುದು.

ಇ) ಈ ಮಂಡಳಿಗೆ ಹೆಚ್ಚು ಹಣ ಬಿಡುಗಡೆ ಮಾಡಲು ಸರ್ಕಾರ ಪರಿಶೀಲಿಸುವುದೇ?

ಶ್ರೀ ಕೆ.ವೆಂಕಟೇಶ್ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು):

ಅ) ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ 1997-98ನೇ ಸಾಲಿನ ಆಯವ್ಯಯದಲ್ಲಿ ಮೀಸಲಾಗಿಡಲಾಗಿರುವ 740:00 ಲಕ್ಷ ರೂ.ಗಳ ಅನುದಾನದ ಪೈಕಿ ಈವರೆಗೆ 370.00 ಲಕ್ಷ ರೂ.ಗಳನ್ನು ಎರಡು ಕಂತುಗಳಲ್ಲಿ ಬಿಡುಗಡೆ ಮಾಡಲಾಗಿದೆ.

ಮೊದಲನೇ ಕಂತಿನಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು 1997-98ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅನುಮೋದಿಸಲ್ಪಟ್ಟಿರುವ 154 ಕಾಮಗಾರಿಗಳ ಅನುಷ್ಠಾನಕ್ಕಾಗಿ ಪೂರ್ಣವಾಗಿ ವಿವಿಧ ಅನುಷ್ಠಾನಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಅಲ್ಲದೆ ಈ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಕ್ರಿಯಾ ಯೋಜನೆಯಲ್ಲಿ ಅನುಮೋದಿಸಲ್ಪಟ್ಟಿರುವ ಎಲ್ಲಾ 500 ಕಾಮಗಾರಿಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ.

ಇ) ಸಂಪನ್ಮೂಲನ ಲಭ್ಯತೆ ಆಧಾರದ ಮೇಲೆ ಮಂಡಳಿಗೆ ಹೆಚ್ಚು ಹಣ ಬಿಡುಗಡೆ ಮಾಡುವ ವಿಷಯವನ್ನು 1998-99ನೇ ಸಾಲಿನಲ್ಲಿ ಪರಿಶೀಲಿಸಲಾಗುವುದು.

ಬಾಗೇಪಲ್ಲಿ ಕ್ಷೇತ್ರದಲ್ಲಿ ಚಿತ್ರಾವತಿ ನದಿಗೆ ಕೆರೆ ನಿರ್ಮಾಣ

37 (34ಎ)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?.

ಅ) ಬಾಗೇಪಲ್ಲಿ ಕ್ಷೇತ್ರದಲ್ಲಿ ಚಿತ್ರಾವತಿ ನದಿಗೆ ಹೊಸದಾಗಿ ಕೆರೆ ನಿರ್ಮಾಣ ಮಾಡುವ ಯೋಜನೆ ಸರ್ಕಾರದವರ ಮುಂದೆ ಇದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) ಹೌದು.

ಆ) ಪ್ರಸ್ತಾವನೆ ಇನ್ನೂ ತನಿಖಾ ಹಂತದಲ್ಲಿದೆ. ವಿವರವಾದ ತನಿಖೆ ನಂತರ ಯೋಜನೆ ತಾಂತ್ರಿಕವಾಗಿ ಹಾಗೂ ಆರ್ಥಿಕವಾಗಿ ಶಕ್ಯವಾದಲ್ಲಿ, ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಕೋಲಾರ ಜಿಲ್ಲೆಯಲ್ಲಿರುವ ಕೆರೆಗಳಲ್ಲಿ ಹೂಳೆತ್ತುವುದು

38 (34)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯ ಕೆರೆಗಳಲ್ಲಿ ಹೂಳು ಎತ್ತುವ ಕಾರ್ಯಕ್ರಮ ಸರ್ಕಾರದವರ ಮುಂದೆ ಇದೆಯೇ;

ಆ) ಇದ್ದರೆ, ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) ಹೌದು

ಆ) ಕೋಲಾರ ಜಿಲ್ಲೆಯಲ್ಲಿನ ಸಣ್ಣ ನೀರಾವರಿ ಕೆರೆಗಳಲ್ಲಿನ ಹೂಳೆತ್ತುವ ಬಗ್ಗೆ ಒಂದು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗುತ್ತಿದೆ. ಮುಂದೆ ದೊರಕಬಹುದಾದ ಅನುದಾನದ ಲಭ್ಯತೆ ಮೇಲೆ ಹಂತ ಹಂತದಲ್ಲಿ ಕ್ರಮ ಕೈಗೊಳ್ಳಲು ಉದ್ದೇಶಿಸಿದೆ.

ನೀರಾವರಿ ಕಾಲುವೆಗಳಲ್ಲಿ ಬಿರುಕು ಉಂಟಾಗುತ್ತಿರುವುದು

39 (35)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಬೃಹತ್ ನೀರಿವರಿ ಸಚಿವರು ಈ